# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಗೌರ ನಜೀರಹ್ಮದ್ ಮಮ್ಮದಲಿ ಮತ್ತು ಶ್ರೀ ಮನೋಜಕುಮಾರ ನಿಂಗನಗೌಡ ಪಾಟೀಲ, ಸದಸ್ಯರುಗಳು, ಮಸಳಿ(ಬಿಕೆ) ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ವಿಜಯಪುರ ರವರ ಪತ್ರ ಸಂಖ್ಯೆ: ಜಿಪಂಅ/ಗ್ರಾಪಂ/ಸಿಬ್ಬಂದಿ/ಸಿಆರ್–269/2016–17/2384, ದಿನಾಂಕ 10.03.2017
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್, ದಿನಾಂಕ 17.04.2017
3) ಶ್ರೀ ಗೌರ ನಜೀರಹ್ಮದ್ ಮಮ್ಮದಲಿ ಮತ್ತು ಶ್ರೀ ಮನೋಜಕುಮಾರ ನಿಂಗನಗೌಡ ಪಾಟೀಲ, ಸದಸ್ಯರುಗಳು, ಮಸಳಿ(ಬಿಕೆ) ಗ್ರಾಮ ಪಂಚಾಯತಿ ಇವರ ಲಿಖಿತ ಉತ್ತರ, ದಿ.05.06.2017
4) ಸರ್ಕಾರದ ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರಗಳು, ದಿನಾಂಕ 19.07.2017 ಮತ್ತು 16.01.2018
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ವಿಜಯಪುರ ರವರ ಪತ್ರ ಸಂಖ್ಯೆ: ಜಿಪಂಅ/ಗ್ರಾಪಂ/ಸಿಬ್ಬಂದಿ/ಸಿಆರ್–269/2016–17/1791, ದಿನಾಂಕ 06.09.2017

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ವಿಜಯಪುರ ಜಿಲ್ಲಾ ಪಂಚಾಯತಿ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಇಂಡಿ ತಾಲ್ಲೂಕು, ಮಸಳಿ(ಬಿಕೆ) ಗ್ರಾಮ ಪಂಚಾಯತಿಯ ಸದಸ್ಯರಾದ ಶ್ರೀ ಗೌರ ನಜೀರಹ್ಮದ್ ಮಮ್ಮದಲಿ ಮತ್ತು ಶ್ರೀ ಮನೋಜಕುಮಾರ ನಿಂಗನಗೌಡ ಪಾಟೀಲ ಇವರುಗಳು ದಿನಾಂಕ 25.07.2015, 02.09.2015, 30.09.2015 ಹಾಗೂ 11.01.2016 ರಂದು ಕರೆದ 4 ಸಾಮಾನ್ಯ ಸಭೆಗಳಿಗೆ ಸತತವಾಗಿ ಗೈರು ಹಾಜರಾಗಿದ್ದು, ಇವರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 13(1)ಸಿ ಪ್ರಕಾರ ಕ್ರಮಜರುಗಿಸಿ, ಇವರುಗಳ ಸದಸ್ಯತ್ವ ರದ್ದುಪಡಿಸಲು ಕಾರ್ಯನಿರ್ವಾಹಕ ಅಧಿಕಾರಿ, ಇಂಡಿ ತಾಲ್ಲೂಕು ಪಂಚಾಯತಿ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ದಾಖಲೆಗಳೊಂದಿಗೆ ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸಿ, ಗ್ರಾಮ ಪಂಚಾಯತಿ ಸದಸ್ಯಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬುದರ ಬಗ್ಗೆ ವಿವರಣೆ ನೀಡುವಂತೆ ಸದರಿ ಗ್ರಾಮ ಪಂಚಾಯತಿ ಸದಸ್ಯರಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಸದರಿ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳು ಸರ್ಕಾರದಿಂದ ಜಾರಿಗೊಳಿಸಲಾಗಿತ್ತು. ಸದರಿ ಸದಸ್ಯರುಗಳು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ನಲ್ಲಿನ 'ಸರ್ಕಾರ' ಎಂಬ ಪದದ ಬದಲಾಗಿ 'ರಾಜ್ಯ ಚುನಾವಣಾ ಅಧಿಕಾರಿ ಅಥವಾ ನಿಯೋಜಿತ ಅಧಿಕಾರಿ' ಎಂದು ತಿದ್ದುಪಡಿ ಆಗಿರುವುದರಿಂದ, ಸರ್ಕಾರಕ್ಕೆ ಅಧಿನಿಯಮದ ಪ್ರಕರಣ 43ಎ ರಡಿ ನೋಟೀಸ್ ನೀಡಲು ಅಧಿಕಾರ ಇಲ್ಲದಿರುವುದರಿಂದ ಪ್ರಕರಣವನ್ನು ಕೈಬಿಡಲು ಹಾಗೂ 2 ತಿಂಗಳ ಸಮಯಾವಕಾಶ ಕೋರಿ ಲಿಖಿತ ಉತ್ತರ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (4) ರನ್ವಯ, ದಿನಾಂಕ 24.07.2017 ಮತ್ತು 20.01.2018 ರಂದು ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ನ್ಯಾಯಾಲಯದಲ್ಲಿ ಮೌಖಿಕ ವಿಚಾರಣೆ ಜರುಗಿಸಲಾಗಿ, ಸದರಿ ಗ್ರಾಮ ಪಂಚಾಯತಿ ಸದಸ್ಯರುಗಳು, ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ವಿಚಾರಣೆಗೆ ಹಾಜರಾಗಿರುತ್ತಾರೆ. ವಿಚಾರಣಾ ಸಂದರ್ಭದಲ್ಲಿ ಪ್ರಕರಣದ ಬಗ್ಗೆ ಹೆಚ್ಚಿನ ತನಿಖೆ ನಡೆಸಿ ಪರಿಶೀಲಿಸಿ ವರದಿ ಸಲ್ಲಿಸಲು ತಿಳಿಸಲಾಗಿತ್ತು.

ಮೇಲೆ ಓದಲಾದ (5) ರಲ್ಲಿ ಪ್ರಕರಣದ ಬಗ್ಗೆ ಪರಿಶೀಲಿಸಿ ಉಪಕಾರ್ಯದರ್ಶಿ, ವಿಜಯಪುರ ಜಿಲ್ಲಾ ಪಂಚಾಯತಿ ರವರು ತನಿಖಾ ವರದಿ ಸಲ್ಲಿಸಿದ್ದು, ಮಸಳಿ ಬಿಕೆ ಗ್ರಾಮ ಪಂಚಾಯತಿಯಲ್ಲಿ ದಿನಾಂಕ 25.07.2015, 29.07.2015, 02.09.2015, 30.09.2015 ಹಾಗೂ 11.01.2016 ರಂದು ಸಭೆಯನ್ನು ಕರೆಯಲಾಗಿದೆ. ದಿನಾಂಕ 29.07.2015 ರಂದು ಕರೆದ ಸಭೆಯನ್ನು ರದ್ದುಗೊಳಿಸಲಾಗಿದ್ದು, ಈ ಸಭೆಗೆ ಶ್ರೀ ಗೌರ ನಜೀರಹ್ಮದ್ ಮಮ್ಮದಲಿ ರವರು ಹಾಜರಾಗಿ ಸಹಿ ಮಾಡಿರುವುದಾಗಿ ತಿಳಿಸಿರುತ್ತಾರೆ. ಹಾಗೂ ಶ್ರೀ ಮನೋಜಕುಮಾರ ನಿಂಗನಗೌಡ ಪಾಟೀಲ ಇವರು ಸತತವಾಗಿ ನಾಲ್ಕು ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗಳಿಗೆ ಗೈರುಹಾಜರಾಗಿರುವುದಾಗಿ ತಿಳಿಸಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ರಲ್ಲಿ ಕೆಳಗಿನಂತೆ ಉಲ್ಲೇಖಿಸಲಾಗಿದೆ.

> **43ಎ. ಸದಸ್ಯರನ್ನು ತೆಗೆದುಹಾಕುವುದು.**- (1) ಸರ್ಕಾರವು, ಗ್ರಾಮಪಂಚಾಯತ್‌ನ ಶಿಫಾರಸ್ಸಿನಂತೆ ಅಥವಾ ಅನ್ಯಥಾ ಯಾವೊಬ್ಬ ಸದಸ್ಯನನ್ನು-
>
> (iii) ಅವನು ಪಂಚಾಯತ್‌ನ ನಾಲ್ಕು ಒಂದಾದ ಮೇಲೊಂದರಂತೆ ಆದ ಸಭೆಗಳಿಗೆ ಹಾಜರಾಗಲು ತಪ್ಪಿದ್ದರೆ, ಮತ್ತು ಅಧ್ಯಕ್ಷನಾಗಲಿ ಅಥವಾ ಉಪಾಧ್ಯಕ್ಷನಾಗಲಿ ಸಭೆಯನ್ನು ಕರೆಯಬೇಕಾಗಿದ್ದಾಗ ಅಥವಾ ಅಗತ್ಯವಾಗಿದ್ದಾಗ ಒಂದಾದ ಮೇಲೊಂದರಂತೆ ನಡೆಯಬೇಕಾದ ಎರಡು ಸಭೆಗಳನ್ನು ಕರೆಯಲು ತಪ್ಪಿದ್ದಾನೆಂದು ಕಂಡು ಬಂದರೆ, ಅವನಿಗೆ ಅಹವಾಲನ್ನು ಹೇಳಿಕೊಳ್ಳಲು ಅವಕಾಶ ನೀಡಿದ ನಂತರ ಮತ್ತು ಅಗತ್ಯವೆಂದು ತಾನು ಭಾವಿಸಿದಂಥ ವಿಚಾರಣೆ ಮಾಡಿದ ನಂತರ ತೆಗೆದು ಹಾಕುವುದು ಸೂಕ್ತವೆಂದು ಭಾವಿಸಿದ್ದರೆ ಆ ಸದಸ್ಯನನ್ನು ಆತನ ಸದಸ್ಯತ್ವದಿಂದ ತೆಗೆದುಹಾಕಬಹುದು.
>
> ವಿವರಣೆ:- ಈ ಪ್ರಕರಣದ ಉದ್ದೇಶಕ್ಕಾಗಿ, (2) ಯಾವ ಅಧ್ಯಕ್ಷನನ್ನು ಅಥವಾ ಉಪಾಧ್ಯಕ್ಷನನ್ನು ಅಥವಾ ಸದಸ್ಯನನ್ನು ಹಾಗೆ ತೆಗೆದು ಹಾಕಲಾಗಿದೆಯೋ ಆ ಅಧ್ಯಕ್ಷನು ಅಥವಾ ಉಪಾಧ್ಯಕ್ಷನು ಅಥವಾ ಸದಸ್ಯನು, ಸದಸ್ಯನಾಗಿ ಅಂಥ ಸ್ಥಾನದ ಪ್ರಕಾರ್ಯಗಳನ್ನು ನಿರ್ವಹಿಸುವುದು ನಿಂತು ಹೋಗತಕ್ಕದ್ದು ಮತ್ತು ಅಧಿನಿಯಮದ 12ನೇ ಪ್ರಕರಣದಲ್ಲಿ ಹೇಳಿರುವಂತೆ ಯಾವುದೇ ಪಂಚಾಯತ್‌ಗೆ ಮುಂದಿನ ಆರು ವರ್ಷಗಳವರೆಗೆ ಚುನಾವಣೆಗೆ ಸ್ಪರ್ಧಿಸಲು ಅನರ್ಹನಾಗತಕ್ಕದ್ದು.

ಸರ್ಕಾರವು ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಆಪಾದಿತರ ಲಿಖಿತ ಹೇಳಿಕೆಗಳನ್ನು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಲ್ಲಿಸಿರುವ ತನಿಖಾ ವರದಿಯನ್ನು ಪರಿಶೀಲಿಸಿ, ಮಸಳಿ(ಬಿಕೆ) ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ಗೌರ ನಜೀರಹ್ಮದ್ ಮಮ್ಮದಲಿ ರವರು ದಿನಾಂಕ 29.07.2015 ರ ಸಭೆಗೆ ಹಾಜರಾಗಿ ಸಹಿ ಮಾಡಿರುವುದು ಹಾಗೂ ಶ್ರೀ ಮನೋಜಕುಮಾರ ನಿಂಗನಗೌಡ ಪಾಟೀಲ ಇವರು ದಿನಾಂಕ 25.07.2015, 29.07.2015, 02.09.2015, 30.09.2015 ಹಾಗೂ 11.01.2016 ರಂದು ಕರೆದ ಸಾಮಾನ್ಯ ಸಭೆಗಳಿಗೆ ಗೈರುಹಾಜರಾಗುವ ಮೂಲಕ, ಸತತವಾಗಿ ನಾಲ್ಕು ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗಳಿಗೆ ಗೈರುಹಾಜರಾಗಿರುವುದು ಕಂಡುಬರುತ್ತದೆ. ಈ ಹಿನ್ನೆಲೆಯಲ್ಲಿ, ಮಸಳಿ(ಬಿಕೆ) ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ಗೌರ ನಜೀರಹ್ಮದ್ ಮಮ್ಮದಲಿ ರವರು ಇನ್ನು ಮುಂದೆ ಈ ರೀತಿ ಆಗದಂತೆ ಎಚ್ಚರಿಕೆ ನೀಡಲು ಹಾಗೂ ಮಸಳಿ(ಬಿಕೆ) ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ಮನೋಜಕುಮಾರ ನಿಂಗನಗೌಡ ಪಾಟೀಲ ಇವರ ಸದಸ್ಯತ್ವವನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ರದ್ದುಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 382 ಗ್ರಾಪಂಅ 2017, ಬೆಂಗಳೂರು, ದಿನಾಂಕ: 03.04.2018**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಮಸಳಿ(ಬಿಕೆ) ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ಗೌರ ನಜೀರಹ್ಮದ್ ಮಮ್ಮದಲಿ ರವರು ದಿನಾಂಕ 29.07.2015 ರ ಸಭೆಗೆ ಹಾಜರಾಗಿ ಸಹಿ ಮಾಡಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ಇನ್ನು ಮುಂದೆ ಈ ರೀತಿ ಆಗದಂತೆ ಎಚ್ಚರಿಕೆ ನೀಡಿ, ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರಂತೆ ಪ್ರಾರಂಭಿಸಿರುವ ವಿಚಾರಣೆಯನ್ನು ಕೈಬಿಟ್ಟು, ಸದರಿಯವರ ವಿರುದ್ಧದ ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಹಾಗೂ ಮಸಳಿ(ಬಿಕೆ) ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ಮನೋಜಕುಮಾರ ನಿಂಗನಗೌಡ ಪಾಟೀಲ ಇವರು ದಿನಾಂಕ 25.07.2015, 29.07.2015, 02.09.2015, 30.09.2015 ಹಾಗೂ 11.01.2016 ರಂದು ಕರೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗಳಿಗೆ ಗೈರುಹಾಜರಾಗುವ ಮೂಲಕ, ಸತತವಾಗಿ ನಾಲ್ಕು ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗಳಿಗೆ ಗೈರುಹಾಜರಾಗಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ, ಮಸಳಿ(ಬಿಕೆ) ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ಮನೋಜಕುಮಾರ ನಿಂಗನಗೌಡ ಪಾಟೀಲ ಇವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ವಿಜಯಪುರ ಜಿಲ್ಲೆ, ಇಂಡಿ ತಾಲ್ಲೂಕು, ಮಸಳಿ(ಬಿಕೆ) ಗ್ರಾಮ ಪಂಚಾಯತಿ ಸದಸ್ಯತ್ವ ಸ್ಥಾನದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

4/4

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1) ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
3) ಕಾರ್ಯನಿರ್ವಾಹಕ ಅಧಿಕಾರಿ, ಇಂಡಿ ತಾಲ್ಲೂಕು ಪಂಚಾಯತಿ, ಇಂಡಿ, ವಿಜಯಪುರ ಜಿಲ್ಲೆ.
4) ಶ್ರೀ ಗೌರ ನಜೀರಹ್ಮದ್ ಮಮ್ಮದಲಿ, ಸದಸ್ಯರು, ಮಸಳಿ(ಬಿಕೆ) ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
5) ಶ್ರೀ ಮನೋಜಕುಮಾರ ನಿಂಗನಗೌಡ ಪಾಟೀಲ, ಸದಸ್ಯರು, ಮಸಳಿ(ಬಿಕೆ) ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
6) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ / ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.